**ಕರ್ನಾಟಕ ಸರ್ಕಾರ**

ಸಂ:ಡಿ.ವೈ.ಇ.ಎಸ್/ಕ್ರೀಚಕಪ್ರೋ/69/2025-26

ಆಯುಕ್ತರ ಕಾರ್ಯಾಲಯ
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ
ರಾಜ್ಯ ಯುವ ಕೇಂದ್ರ, ನೃಪತುಂಗ ರಸ್ತೆ,
ಬೆಂಗಳೂರು-01, ದಿನಾಂಕ: 17-07-2026

**ಸುತ್ತೋಲೆ**

ವಿಷಯ: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಾರ್ಯಕ್ರಮಗಳಡಿ 2025-26 ನೇ ಸಾಲಿನ ಶೈಕ್ಷಣಿಕ ಶುಲ್ಕ ಮರುಪಾವತಿ ಯೋಜನೆಗಾಗಿ ಅರ್ಜಿಗಳನ್ನು ಆಹ್ವಾನಿಸುವ ಕುರಿತು.

********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2026-27 ನೇ ಸಾಲಿನ ಕ್ರೀಡಾ ಕಲ್ಯಾಣ ಯೋಜನೆ ಅಡಿಯಲ್ಲಿ ಅಂತರಾಷ್ಟ್ರೀಯ, ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ಅದೀಕೃತ ಕ್ರೀಡಾಕೂಟಗಳಲ್ಲಿ ಪದಕ ವಿಜೇತರಾದ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ ನೀಡಲು 2025-26 ನೇ ಸಾಲಿನ ಶೈಕ್ಷಣಿಕ ಶುಲ್ಕ ಮರುಪಾವತಿ ಯೋಜನೆಗಾಗಿ ಅರ್ಜಿಗಳನ್ನು ಆನ್ ಲೈನ್ ಮೂಲಕ ಆಹ್ವಾನಿಸಲಾಗಿದೆ.

ಅಸಕ್ತ ಕ್ರೀಡಾಪಟುಗಳು ಅರ್ಜಿಗಳನ್ನು ಅಧಿಕೃತ ಜಾಲತಾಣ: **https://sevasindu.karnataka.gov.in** ಮೂಲಕ ಕಡ್ಡಾಯವಾಗಿ ಆನ್‌ಲೈನ್ ಮೂಲಕ ನಿಗದಿತ ದಿನಾಂಕದೊಳಗೆ ಸಲ್ಲಿಸಲು ಸೂಚಿಸಲಾಗಿದೆ. ಅರ್ಜಿ ಸಲ್ಲಿಸಲು ಅಂತಿಮ **ದಿನಾಂಕ:31.07.2026 ರಂದು ಕೊನೆಯ ದಿನಾಂಕವಾಗಿರುತ್ತದೆ,** ಈ ಬಗ್ಗೆ ತಮ್ಮ ಜಿಲ್ಲೆಯಲ್ಲಿ ಹೆಚ್ಚು ಪ್ರಚಾರದಲ್ಲಿರುವ ಸ್ಥಳೀಯ ದಿನ ಪತ್ರಿಕೆಗಳಲ್ಲಿ ವ್ಯಾಪಕ ಪ್ರಚಾರ ನೀಡಿ ಪತ್ರಿಕಾ ವರದಿ ಪ್ರತಿಯನ್ನು ಕೇಂದ್ರ ಕಛೇರಿಗೆ ಸಲ್ಲಿಸಲು ತಿಳಿಸಿದೆ.

**(ಅರ್ಜಿ ಸಲ್ಲಿಸುವ ಯುವ ಸಹಾಯವಾಣಿ 155265 ಗೆ ಕಛೇರಿ ಅವಧಿಯಲ್ಲಿ ಸಂಪರ್ಕಿಸಲು ಸೂಚಿಸಿದೆ.**

ಆಯುಕ್ತರು
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

ಗೆ,

1. ಮಾನ್ಯ ಉಪಾಧ್ಯಕ್ಷರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಕಂಠೀರವ ಕ್ರೀಡಾಂಗಣ.
2. ಮಹಾನಿರ್ದೇಶಕರು, ಕರ್ನಾಟಕ ಕ್ರೀಡಾ ಪ್ರಾಧಿಕಾರ, ಬೆಂಗಳೂರು.
3. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು
4. ಅಧ್ಯಕ್ಷರು, ಕರ್ನಾಟಕ ಒಲಂಪಿಕ್ ಸಂಸ್ಥೆ, ಬೆಂಗಳೂರು.
5. ಎಲ್ಲಾ ಜಿಲ್ಲೆಗಳ ಉಪ/ಸಹಾಯಕ ನಿರ್ದೇಶಕರು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.
6. ರಾಜ್ಯದ ಎಲ್ಲಾ ಕ್ರೀಡಾ ಸಂಸ್ಥೆಗಳ ಅಧ್ಯಕ್ಷರು/ಕಾರ್ಯದರ್ಶಿಗಳು.
7. ಹೆಚ್ಚುವರಿ ಪ್ರತಿ.

**(ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿದ ಕ್ರೀಡಾಪಟುಗಳಿಗೆಶೈಕ್ಷಣಿಕ ಶುಲ್ಕ ಮರುಪಾವತಿ ಮಾಡುವ ಯೋಜನೆಯ ಮಾರ್ಗಸೂಚಿಗಳು)**

*******

1. ಕರ್ನಾಟಕ ರಾಜ್ಯವನ್ನು ಪ್ರತಿನಿಧಿಸಿ ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಕ್ರೀಡೆಗಳಲ್ಲಿ ಭಾಗವಹಿಸಿ ವಿಜೇತರಾದ ಕ್ರೀಡಾಪಟುಗಳಿಗೆ ಶೈಕ್ಷಣಿಕ ಶುಲ್ಕವನ್ನು ಇಲಾಖೆಯಿಂದ ಮರುಪಾವತಿ ಮಾಡುವ ಮೂಲಕ ಪ್ರತಿಭಾವಂತ ಕ್ರೀಡಾಪಟುಗಳಿಗೆ ಪ್ರೋತ್ಸಾಹ ನೀಡುವುದು ಸರ್ಕಾರದ ಈ ಯೋಜನೆಯ ಮುಖ್ಯ ಉದ್ದೇಶವಾಗಿದೆ.
2. ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಕ್ರೀಡೆಗಳಲ್ಲಿ ವಿಜೇತರಾದ ಕ್ರೀಡಾಪಟುಗಳ ಅಧಿಕೃತ ಬೋಧನಾ ಶುಲ್ಕಗಳನ್ನು ವಾರ್ಷಿಕ ರೂ. 50,000/- ಗಳ ಗರಿಷ್ಟ ಮೊತ್ತಕ್ಕೆ ಮರುಪಾವತಿ ಮಾಡತಕ್ಕದ್ದು. ಇದರಲ್ಲಿ ಕಟ್ಟಡ ಶುಲ್ಕ, ಡೋನೇಷನ್, ನಿರ್ವಹಣಾ ಶುಲ್ಕ, ಸಾಂಸ್ಕೃತಿಕ ಕಾರ್ಯಕ್ರಮ ಶುಲ್ಕ ಇನ್ನಿತರ ಶುಲ್ಕಗಳನ್ನು ಪಾವತಿಸಲು ಅವಕಾಶವಿರುವುದಿಲ್ಲ.
3. ಆಯಾ ವರ್ಷದ ಶೈಕ್ಷಣಿಕ ಶುಲ್ಕವನ್ನು ಹಿಂದಿನ 5 ವರ್ಷಗಳ ಕ್ರೀಡಾ ಸಾಧನೆಯನ್ನು ಪರಿಗಣಿಸಿ ನೀಡುವುದು.
4. ಈ ಯೋಜನೆಯ ಪ್ರಯೋಜನೆಯನ್ನು ಪಡೆಯಲು ಕರ್ನಾಟಕವನ್ನು ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ಪ್ರತಿನಿಧಿಸಿ, ಪ್ರಥಮ ಪಿಯುಸಿಯಿಂದ ಸ್ನಾತಕೋತ್ತರ ಪದವಿ (ವೃತ್ತಿಪರ ಕೋರ್ಸ್ ಒಳಗೊಂಡು) ವ್ಯಾಸಂಗ ಮಾಡುತ್ತಿರುವ ಕೇಂದ್ರ, ರಾಜ್ಯ ಸರ್ಕಾರಿ ಅನುದಾನಿತ ಮತ್ತು ಖಾಸಗಿ ಶಾಲಾ-ಕಾಲೇಜುಗಳ ಕ್ರೀಡಾ ವಿದ್ಯಾರ್ಥಿಗಳು ಅರ್ಹರಿರುತ್ತಾರೆ.
5. ಶೈಕ್ಷಣಿಕ ವರ್ಷದ ಶುಲ್ಕ ಪಾವತಿಸಲು ನಿಗಧಿತ ನಮೂನೆಯಲ್ಲಿರಸೀದಿಗಳೊಂದಿಗೆ ಶಾಲಾ ಮುಖ್ಯೋಪಾಧ್ಯಾಯರು/ಕಾಲೇಜು ಪ್ರಾಂಶುಪಾಲರ ಮೂಲಕ ದೃಢಿಕರಿಸಿ ಸಂಬಂಧಪಟ್ಟ ಜಿಲ್ಲೆಯ ಸಹಾಯಕ ನಿರ್ದೇಶಕರು,ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಶಿಫಾರಸ್ಸಿನೊಂದಿಗೆ ಸಲ್ಲಿಸತಕ್ಕದ್ದು.
6. ರಾಷ್ಟ್ರೀಯ ಮಟ್ಟದ ಕ್ರೀಡೆಗಳಲ್ಲಿ ಭಾಗವಹಿಸಿ ಚಿನ್ನ, ಬೆಳ್ಳಿ ಮತ್ತು ಕಂಚು ಪದಕ ವಿಜೇತರಾದ ಕರ್ನಾಟಕದ ಕ್ರೀಡಾಪಟುಗಳು ಮಾತ್ರ ಈ ಸೌಲಭ್ಯ ಪಡೆಯಲು ಅರ್ಹರಿರುತ್ತಾರೆ.
   ಅಂತಾರಾಷ್ಟ್ರೀಯ ಮಟ್ಟದ ಕ್ರೀಡೆಗಳಲ್ಲಿ ಭಾಗವಹಿಸುವಿಕೆ, ಚಿನ್ನ, ಬೆಳ್ಳಿ ಮತ್ತು ಕಂಚಿನ ಪದಕ ವಿಜೇತರ ಸಾಧನೆಯನ್ನು ಪರಿಗಣಿಸಲಾಗುವುದು.
7. ವಿಕಲಚೇತನ ಕ್ರೀಡಾಟಪಟುಗಳಿಗೂ ಇದೇ ಮಾನದಂಡ ಅನ್ವಯಿಕವಾಗುತ್ತದೆ. ಜೊತೆಗೆ ವಿಕಲಚೇತನ ಕ್ರೀಡಾಪಟುಗಳು ಕಡ್ಡಾಯವಾಗಿ ಸರ್ಕಾರಿ ವೈದ್ಯರಿಂದ ನಿಗಧಿತ ವೈದ್ಯಕೀಯ ಪ್ರಮಾಣ ಪತ್ರಗಳನ್ನು ಸಲ್ಲಿಸತಕ್ಕದ್ದು.
8. ಕರ್ನಾಟಕ ನಿವಾಸಿಗಳಲ್ಲದ ಹಾಗೂ ರಾಜ್ಯವನ್ನು ಪ್ರತಿನಿಧಿಸದೇ ಇರುವ ಕ್ರೀಡಾಪಟುಗಳು, ರಾಜ್ಯದಲ್ಲಿ ವ್ಯಾಸಂಗ ಮಾಡುತ್ತಿಲ್ಲದ ಕ್ರೀಡಾಪಟುಗಳು ಈ ಯೋಜನೆಗೆ ಅರ್ಹರಿರುವುದಿಲ್ಲ.
9. ಕ್ರೀಡಾ ಸಾಧನೆಗಳು ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಮಾನ್ಯತೆ ಪಡೆದ ಕ್ರೀಡಾ ಸಂಸ್ಥೆಗಳು/ಫೆಡರೇಷನ್ ಆಯೋಜಿಸಿರುವ ಕ್ರೀಡಾಕೂಟಗಳಲ್ಲಿ ಭಾಗವಹಿಸಿರುವ ಬಗ್ಗೆ ದಾಖಲಾಗಿರಬೇಕು.
10. ಅಂತಾರಾಷ್ಟ್ರೀಯ ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಆಯೋಜಿಸುವ ಆಹ್ವಾನ ಕ್ರೀಡಾಕೂಟಗಳಲ್ಲಿ ಭಾಗವಹಿಸಿರುವ ಕ್ರೀಡಾಪಟುಗಳು ಈ ಯೋಜನೆಯ ಪ್ರಯೋಜನಾ ಪಡೆಯಲು ಅರ್ಹರಾಗಿರುವುದಿಲ್ಲ.
11. ಅಂತರಾಷ್ಟ್ರೀಯ ಕ್ರೀಡಾಕೂಟಕ್ಕೆ ಯಾವ ಕ್ರೀಡಾ ಸಂಸ್ಥೆಯ ಮೂಲಕ ರಾಜ್ಯವನ್ನು ಪ್ರತಿನಿಧಿಸಿರುತ್ತಾರೆ ಎಂಬುದರ ಬಗ್ಗೆ ಭಾರತ ಸರ್ಕಾರದ ಮಾನ್ಯತೆ ಪಡೆದ ಸಂಬಂದ ಪಟ್ಟ ಕ್ರೀಡೆಯ ರಾಷ್ಟ್ರೀಯ ಫೆಡರೇಷನ್/ಭಾರತೀಯ ಕ್ರೀಡಾ ಪ್ರಾಧಿಕಾರ ಇವರಿಂದ

ಪ್ರಮಾಣೀಕರಿಸಿದ ಮೂಲ ಪತ್ರಗಳನ್ನು ಪರಿಗಣಿಸಿ ಶೈಕ್ಷಣಿಕ ಶುಲ್ಕ ಮರುಪಾವತಿ ಪಡೆಯಲು ದೃಢೀಕರಣ ಪತ್ರವನ್ನು ಅರ್ಜಿಯ ಜೊತೆಗೆ ಒದಗಿಸಬೇಕು.

12. ಯಾವುದೇ ಅಂತರಾಷ್ಟ್ರೀಯ ಮಟ್ಟದಲ್ಲಿ ಆಯೋಜಿಸುವ ಕ್ರೀಡಾ ಸ್ಪರ್ಧೆಯಲ್ಲಿ ನೇರ ಪ್ರವೇಶ ಪಡೆದಂತಹ ಕ್ರೀಡಾಪಟುಗಳಿಗೆ ಶೈಕ್ಷಣಿಕ ಶುಲ್ಕ ಮರುಪಾವತಿ ಶುಲ್ಕ ಪಡೆಯಲು ಅವಕಾಶವಿರುವುದಿಲ್ಲ.
13. ಭಾರತ ಸರ್ಕಾರದ ಯುವ ವ್ಯವಹಾರಗಳು ಮತ್ತು ಕ್ರೀಡಾ ಮಂತ್ರಾಲಯದಿಂದ ಅಧಿಕೃತ ಕ್ರೀಡಾ ಸಂಸ್ಥೆಗಳಿಗೆ ಸಂಘಟಿಸಲಾದ ಕ್ರೀಡೆಗಳಲ್ಲಿ ಭಾಗವಹಿಸಿ ಪದಕ ವಿಜೇತರಾದ ರಾಜ್ಯ ಕ್ರೀಡಾಪಟುಗಳು ಈ ಯೋಜನೆಗೆ ಅರ್ಹರಿರುತ್ತಾರೆ.
14. ಈ ಕೆಳಕಂಡ ಕ್ರೀಡೆಗಳಲ್ಲಿ ಭಾಗವಹಿಸಿ ಸಾಧನೆ ಮಾಡಿದ ಕ್ರೀಡಾಪಟುಗಳಿಗೆ ಈ ಯೋಜನೆ ಜಾರಿಗೊಳಿಸಿ ಅನುಷ್ಠಾಗೊಳಿಸಬಹುದು.

- ಒಲಂಪಿಕ್ ಗೇಮ್ಸ್/ಪ್ಯಾರಾ ಒಲಂಪಿಕ್ ಗೇಮ್ಸ್
- ವರ್ಲ್ಡ್ ಗೇಮ್ಸ್/ಚಾಂಪಿಯನ್ ಷಿಪ್
- ಏಷಿಯನ್ ಗೇಮ್ಸ್/ಪ್ಯಾರಾ ಏಷಿಯನ್ ಗೇಮ್ಸ್
- ಕಾಮನ್ ವೇಲ್ತ್ ಗೇಮ್ಸ್
- ಏಷಿಯನ್ ಚಾಂಪಿಯನ್ ಷಿಪ್
- ಕಾಮನ್ ವೇಲ್ತ್ ಚಾಂಪಿಯನ್ ಷಿಪ್
- ಎಸ್ಎಎಫ್ ಗೇಮ್ಸ್
- ಮಾನ್ಯತೆ ಹೊಂದಿರುವ ಅಂತಾರಾಷ್ಟ್ರೀಯ ಕ್ರೀಡಾಕೂಟಗಳು (Non Ranking Competitions)
- ರಾಷ್ಟ್ರೀಯ ಕ್ರೀಡಾಕೂಟ
- ರಾಷ್ಟ್ರೀಯ ಚಾಂಪಿಯನ್ ಷಿಪ್
- ಸ್ಕೂಲ್ ಗೇಮ್ಸ್ ಫೆಡರೇಷನ್ ಆಫ್ ಇಂಡಿಯಾ, ಅಖಿಲ ಭಾರತ ಅಂತರ ವಿಶ್ವವಿದ್ಯಾಲಯ ಕ್ರೀಡಾಕೂಟ
- ಅಖಿಲ ಭಾರತ ಅಂತರ ವಲಯ ಕ್ರೀಡಾಕೂಟ
- ಭಾರತ ಸರ್ಕಾರದ ಅಂಗೀಕೃತ ಕ್ರೀಡಾ ಫೆಡರೇಷನ್ ನಿಂದ ಸಂಘಟಿಸಲಾದ ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳು/ಶಾಲಾ ಮಟ್ಟದ ಚಾಂಪಿಯನ್ ಷಿಪ್/ಖೇಲೋ ಇಂಡಿಯಾ ಕ್ರೀಡಾಕೂಟಗಳು.

ಆಯುಕ್ತರು

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ